# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

| ಸಂಪುಟ –೧೬೧<br>Volume - 161 | ಬೆಂಗಳೂರು, ಮಂಗಳವಾರ, ೧೪, ಜುಲೈ, ೨೦೨೬ (ಆಷಾಢ, ೨೩, ಶಕವರ್ಷ, ೧೯೪೮)<br>BENGALURU, TUESDAY, 14, JULY, 2026 (ASHADHA, 23, SHAKAVARSHA, 1948) | ಸಂಚಿಕೆ ೧೩೬<br>Issue 136 |
|---|---|---|

## ಭಾಗ ೫

## ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

**ಕರ್ನಾಟಕ ಲೋಕಾಯುಕ್ತ, ಡಾ||ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001**

ಅಧಿಸೂಚನೆ ಸಂಖ್ಯೆ:ಕಲೋ/ಸಿಬ್ಬಂದಿ-3/01/ನೇನೇ/ಸಿಸಿಟಿ/2026-27(ಆರ್‌ಪಿಸಿ) ದಿನಾಂಕ:- 14/07/2026

### ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಳಿಗಾಗಿ ಅಭ್ಯರ್ಥಿಗಳ ನೇಮಕಾತಿ

**ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಗ್ರೂಪ್-ಸಿ ವೃಂದದ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಳನ್ನು ನೇರ ನೇಮಕಾತಿಯಿಂದ ತುಂಬುವ ಬಗ್ಗೆ.**

***************

- **ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 17/07/2026**
- **ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17/08/2026 (ಮಧ್ಯರಾತ್ರಿ 11:59 ಗಂಟೆಯವರೆಗೆ)**

**ನೇಮಕಾತಿ ವಿಧಾನ** : ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಗ್ರೂಪ್-'ಸಿ' ವೃಂದದ ಉಳಿಕೆ ಮೂಲ ವೃಂದದಲ್ಲಿ ಖಾಲಿಯಿರುವ 25 ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕಾಯುಕ್ತ (ವೃಂದ, ನೇಮಕಾತಿ ಮತ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಷರತ್ತು) ನಿಯಮಗಳು 1988 ರ ಅನುಬಂಧ-'ಎ' ಮತ್ತು ಕೆ.ಸಿ.ಎಸ್ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 19 ಎಸ್ ಸಿ ಆರ್ 2006 ದಿನಾಂಕ:14-08-2006 ರನ್ವಯ ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ವೆಬ್‌ಸೈಟ್ **URL link** https://lokayukta.karnataka.gov.in ನಲ್ಲಿ (on-line) ಮೂಲಕ

ಸಲ್ಲಿಸಲು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆನ್-ಲೈನ್ (on-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

## 1. ಕ್ಲರ್ಕ್-ಕಂ-ಟೈಪಿಸ್ಟ್:- 25 ಹುದ್ದೆಗಳು

ವೇತನ ಶ್ರೇಣಿ: 34100-800-35700-900-39300-1000-43300-1125-47800-1250-52800-1375-58300-1500-64300-1650-67600

## 2. ಹುದ್ದೆಗಳ ವರ್ಗೀಕರಣ:-

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ಬೆಂಗಳೂರು, ದಿನಾಂಕ:13-05-2026 & ದಿನಾಂಕ: 25-05-2026 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2023, ಬೆಂಗಳೂರು ದಿನಾಂಕ:08-03-2023ರ ಪ್ರಕಾರ ಹುದ್ದೆಗಳನ್ನು ಕೆಳಕಂಡಂತೆ ವರ್ಗೀಕರಿಸಲಾಗಿದೆ.

**ಉಳಿಕೆ ಮೂಲ ವೃಂದದ 25 ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಳ ವರ್ಗೀಕರಣ**

| ಕ್ರ ಸಂ. | ಮೀಸಲಾತಿ ಪ್ರವರ್ಗ | | ಇತರೆ | ಮ. ಅ | ಗ್ರಾ. ಅ | ಮಾ. ಸೈ | ಕ. ಮಾ. ಅ | ಯೋ. ನಿ. ಅ | ಅಂ. ಅ | ತೃ. ಲಿಂ. | ಒಟ್ಟು |
|---|---|---|---|---|---|---|---|---|---|---|---|
| 1 | ಸಾಮಾನ್ಯ ಅರ್ಹತೆ | | | 4 | 3 | 2 | 1 | 1 | | 1 | 12 |
| 2 | ಪರಿಶಿಷ್ಟ ಜಾತಿ | ಪ್ರವರ್ಗ-ಎ | 1 | 1 | | | | | | | 2 |
| | | ಪ್ರವರ್ಗ-ಬಿ | 1 | | | | | | | | 1 |
| | | ಪ್ರವರ್ಗ-ಸಿ | 1 | | | | | | | | 1 |
| 3 | ಪರಿಶಿಷ್ಟ ಪಂಗಡ | | | 1 | | | | | | | 1 |
| 4 | ಪ್ರವರ್ಗ-1 | | | 1 | | | | | | | 1 |
| 5 | ಪ್ರವರ್ಗ-2ಎ | | | 1 | 2 | | | | 1* | | 4 |
| 6 | ಪ್ರವರ್ಗ-2ಬಿ | | | 1 | | | | | | | 1 |
| 7 | ಪ್ರವರ್ಗ-3ಎ | | 1 | | | | | | | | 1 |
| 8 | ಪ್ರವರ್ಗ-3ಬಿ | | 1 | | | | | | | | 1 |
| **ಒಟ್ಟು** | | | **5** | **9** | **5** | **2** | **1** | **1** | **1*** | **1** | **25** |

***ಚಲನವಲನ ವೈಕಲ್ಯ**

## 3. ಶೈಕ್ಷಣಿಕ ವಿದ್ಯಾರ್ಹತೆ :-

1. ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ

(ಮೂಲ ಅಂಕಪಟ್ಟಿಯನ್ನು ಅರ್ಹತಾ ಪರೀಕ್ಷೆಗೆ ಕರೆ ಬಂದಾಗ ಪರಿಶೀಲನೆಗಾಗಿ ಹಾಜರುಪಡಿಸುವುದು).

**ಸೂಚನೆ:**

1. ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರಾಕ್ಟೀಸ್‌ನ ಬೆರಳಚ್ಚು ವಿಷಯಗಳ ತೇರ್ಗಡೆಯ ತತ್ಸಮಾನತೆ ಬಗ್ಗೆ ಸರ್ಕಾರದ ಅದೇಶ ಸಂಖ್ಯೆ: ಇಡಿ 174 ಟಿಪಿಇ 2005 ಬೆಂಗಳೂರು, ದಿನಾಂಕ:09ನೇ ನವೆಂಬರ್ 2006 ರನ್ವಯ ಪರಿಗಣಿಸಲಾಗುವುದು. (ಸದರಿ ಸರ್ಕಾರದ ಆದೇಶವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಅಧಿಕೃತ ಜಾಲತಾಣದಲ್ಲಿ(ವೆಬ್ ಸೈಟ್) ಅಧಿಸೂಚನೆ ವಿಭಾಗದಲ್ಲಿ ವೀಕ್ಷಿಸಬಹುದು)

2. ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಯ ತತ್ಸಮಾನ ವಿದ್ಯಾರ್ಹತೆಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ:27/02/2018ರಲ್ಲಿ ತಿಳಿಸಿರುವಂತೆ ಪರಿಗಣಿಸಲಾಗುವುದು. (ಸದರಿ ಸರ್ಕಾರದ ಸುತ್ತೋಲೆಯನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಜಾಲತಾಣದಲ್ಲಿ(ವೆಬ್ ಸೈಟ್) ಅಧಿಸೂಚನೆ ವಿಭಾಗದಲ್ಲಿ ವೀಕ್ಷಿಸಬಹುದು.)

**4. <u>ನೇಮಕಾತಿ ಪ್ರಕ್ರಿಯೆ:</u>**

i) ಕರ್ನಾಟಕ ಲೋಕಾಯುಕ್ತ (ವೃಂದ, ನೇಮಕಾತಿ ಮತ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಷರತ್ತು) (ತಿದ್ದುಪಡಿ) ನಿಯಮಗಳು 2005ರ ಅನುಬಂಧ-'ಎ' ರಲ್ಲಿ ತಿಳಿಸಿದಂತೆ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳ ಮತ್ತು ಮೀಸಲಾತಿ ಆಧಾರದ ಮೇರೆಗೆ ಶ್ರೇಯಾಂಕದಲ್ಲಿರುವ ಅಭ್ಯರ್ಥಿಗಳ ಪೈಕಿ 1:10 ಅನುಪಾತದಲ್ಲಿ ಅರ್ಹತಾ ಪಟ್ಟಿಯನ್ನು ತಯಾರಿಸಿ, ಸದರಿ ಪಟ್ಟಿಯಲ್ಲಿ ಇರುವಂತಹ ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ಅರ್ಹತಾ ಪರೀಕ್ಷೆ ನಡೆಸಲಾಗುವುದು. ಸದರಿ ಅರ್ಹತಾ ಪರೀಕ್ಷೆಗೆ ನಿಗಧಿಪಡಿಸಲಾದ ಗರಿಷ್ಠ 20 ಅಂಕಗಳಿಗೆ ಅಭ್ಯರ್ಥಿಯು ಕನಿಷ್ಠ ಶೇ.50 ರಷ್ಟು ಅಂಕಗಳನ್ನು ಪಡೆದಲ್ಲಿ ಮಾತ್ರ ಆಯ್ಕೆ ಪಟ್ಟಿಗೆ ಪರಿಗಣಿಸಲಾಗುವುದು.

ii) ಅರ್ಹತಾ ಪರೀಕ್ಷೆಯನ್ನು ಗಣಕಯಂತ್ರದ ಮೂಲಕ ಕೈಗೊಳ್ಳಲಾಗುವುದು.

iii) ಈ ಅಧಿಸೂಚನೆಗೆ ಶೀಘ್ರಲಿಪಿಗಾರರು ಮತ್ತು ಬೆರಳಚ್ಚುಗಾರರ ಹುದ್ದೆಗಳಿಗೆ ನೇಮಕಾತಿ ನಿಯಮಗಳು 1983 ಅನ್ವಯಿಸುವುದಿಲ್ಲ.

**5. <u>ಅರ್ಜಿ ಶುಲ್ಕ:</u>**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ-2(ಎ), 2(ಬಿ), 3(ಎ), 3(ಬಿ) ಮತ್ತು ಮಾಜಿ ಸೈನಿಕರಿಗೆ | 250/- |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

**6. <u>ಅರ್ಜಿ ಶುಲ್ಕ ಪಾವತಿ ವಿಧಾನ:</u>**

(ಅ) ನಿಗಧಿತ ಶುಲ್ಕವನ್ನು ಕರ್ನಾಟಕ ಲೋಕಾಯುಕ್ತ ಕಚೇರಿಯ ಅಧಿಕೃತ ವೆಬ್‌ಸೈಟ್ https://lokayukta.kar.nic.in ರಲ್ಲಿ ನೀಡಲಾದ ಲಿಂಕ್ ಮುಖಾಂತರ ಕೆನರಾ ಬ್ಯಾಂಕ್‌ನ **CANARA Collect** ಮೂಲಕ ನಿಗಧಿತ ಶುಲ್ಕವನ್ನು **Online Payment through**

**Canara e pay modes/ Net Banking or Credit or Debit Card or UPI ID** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್/ಡಿಮ್ಯಾಂಡ್ ಡ್ರಾಫ್ಟ್/ ಪೋಸ್ಟಲ್ ಆರ್ಡರ್/ ಮನಿ ಆರ್ಡರ್, ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿ ಮಾಡದೇ ಇರುವ ಸಾಮಾನ್ಯ ವರ್ಗ, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು

(ಆ) ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಯಾವುದೇ ಸಂದರ್ಭದಲ್ಲೂ ಹಿಂದಿರುಗಿಸಲಾಗುವುದಿಲ್ಲ.

(ಇ) ಆನ್-ಲೈನ್ ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳು ಕಂಡುಬಂದಲ್ಲಿ ಹೆಲ್ಪ್-ಲೈನ್ ಸಂಖ್ಯೆ:

**080-22011297** ಗೆ ಕಚೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

(ಈ) ಅಭ್ಯರ್ಥಿಗಳಿಗೆ ನೀಡಿರುವ ಸೂಚನೆಗಳಲ್ಲಿ ಮೀಸಲಾತಿ, ವಿದ್ಯಾರ್ಹತೆ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಕೆಲಸದ ವೇಳೆಯಲ್ಲಿ ದೂರವಾಣಿ ಸಂಖ್ಯೆ:**080-22011210 / 080-22011279** ಗೆ ಸಂಪರ್ಕಿಸಬಹುದಾಗಿದೆ.

- **ಆನ್-ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭದ ದಿನಾಂಕ: 17/07/2026**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17/08/2026 (ಮಧ್ಯರಾತ್ರಿ 11:59 ಗಂಟೆಯವರೆಗೆ)**
- **ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 18/08/2026 (ಮಧ್ಯರಾತ್ರಿ 11:59 ಗಂಟೆಯವರೆಗೆ).**

(ಉ) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

(i) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು, ಗರಿಷ್ಠ 50 ಕೆ.ಬಿ ಅಳತೆಯಿರುವ 5 ಸೆಂ.ಮೀ. ಉದ್ದ x 3.6 ಸೆಂ.ಮೀ ಅಗಲವಿರಬೇಕು ಹಾಗೂ ಅದು ಜೆಪಿಜಿ ನಮೂನೆಯಲ್ಲಿರಬೇಕು. ಭಾವಚಿತ್ರದ ಹಿನ್ನೆಲೆ ಬಿಳಿ ಬಣ್ಣದಾಗಿರಬೇಕು.

(ii) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು.

(iii) ಅಭ್ಯರ್ಥಿಯು ಬಿಳಿ ಕಾಗದದ ಮೇಲೆ ಕಪ್ಪು ಬಾಲ್ ಪಾಯಿಂಟ್ ಪೆನ್‌ನಲ್ಲಿ (2.5 ಸೆಂ.ಮೀ ಅಗಲ x 7.5 ಸೆಂ.ಮೀ. ಉದ್ದವಿರುವ ಗರಿಷ್ಠ 25 ಕೆ.ಬಿ ಪ್ರಮಾಣವಿರುವಂತೆ) ತಮ್ಮ ಸಹಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು ಹಾಗೂ ಅದು ಜೆಪಿಜಿ ನಮೂನೆಯಲ್ಲಿರಬೇಕು.

(iv) ಅಭ್ಯರ್ಥಿಯು ಪ್ರಸ್ತುತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಾದ ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿ. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿಗಳನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು.

## 7. <u>ವಯೋಮಿತಿ:-</u>

1. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರಿಗೆ ಕನಿಷ್ಠ 18 ವರ್ಷಗಳು ತುಂಬಿರಬೇಕು ಹಾಗೂ

2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 262 ಸೇನೆನಿ 2025, ದಿನಾಂಕ:29/01/2026ರಲ್ಲಿ ಆದೇಶಿಸಿರುವಂತೆ ಈ ಅಧಿಸೂಚನೆಯಲ್ಲಿ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ 05 ವರ್ಷಗಳ ಸಡಿಲಿಕೆಯನ್ನು ನೀಡಿ ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ನಿಗಧಿಪಡಿಸಲಾಗಿರುತ್ತದೆ.

| | | |
|---|---|---|
| ಅ | ಪ.ಜಾ/ಪ.ಪಂ/ಪ್ರ-1 | 45 ವರ್ಷ |
| ಆ | ಪ್ರವರ್ಗ-II (ಎ),II (ಬಿ), III (ಎ), III (ಬಿ) | 43 ವರ್ಷ |
| ಇ | ಸಾಮಾನ್ಯ ಅರ್ಹತೆ | 40 ವರ್ಷ |

ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ 6ನೇ ನಿಯಮದ ಅನುಸಾರ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟು ಮಟ್ಟಿಗೆ ಹೆಚ್ಚಿಸಲಾಗುವುದು. ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯು ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವನ್ನು ಆಧರಿಸಿರುತ್ತದೆ.

(i) ಅಭ್ಯರ್ಥಿಯು, ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ಸ್ಥಳೀಯ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ii) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳು ಆಗುವುದೋ ಅಷ್ಟು ವರ್ಷಗಳು.

ವಿವರಣೆ: (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂಥಹ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಮೇಲ್ಕಂಡ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವನು

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆಹೊಂದಿದ ವ್ಯಕ್ತಿ

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು

(1)ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

(2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿತ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

(3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

(iii) ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ ಅಭ್ಯರ್ಥಿಯಾಗಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(iv) ಅಭ್ಯರ್ಥಿಯು ಗ್ರಾಮ ಸಮೂಹ ಪರಿಶೀಲಕರಾಗಿ ಕಾರ್ಯನಿರ್ವಹಿಸಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ

(v) ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(vi) ಅಭ್ಯರ್ಥಿಯು ಜನಗಣತಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 05 ವರ್ಷಗಳು, ಇವೆರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(vii) ಅಭ್ಯರ್ಥಿಯು ವಿಧವೆಯಾಗಿರುವ ಸಂದರ್ಭದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(viii) ಅಭ್ಯರ್ಥಿಯು ಜೀತ ಕಾರ್ಮಿಕರಾಗಿದ್ದಲ್ಲಿ, 10 ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

**(ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣಪತ್ರದಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಈ ಹೊರತು ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ).**

**(ix) ಮೀಸಲಾತಿ ಕೋರುವ ಅಭ್ಯರ್ಥಿಗಳು :-**

ಪರಿಶಿಷ್ಟ ಜಾತಿ (ಪ್ರವರ್ಗ-ಎ/ಬಿ/ಸಿ)/ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಪ್ರವರ್ಗಗಳ ಅಡಿಯಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಕರ್ನಾಟಕ ಸರ್ಕಾರವು ನಿಗಧಿಪಡಿಸಿದ ನಮೂನೆ-ಡಿ, ನಮೂನೆ-ಇ ಮತ್ತು ನಮೂನೆ-ಎಫ್ ರಲ್ಲಿ ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು ಹಾಗೂ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಸಿಂಧು ಆಗಿರಬೇಕು.

**<u>ಗ್ರಾಮೀಣ ಅಭ್ಯರ್ಥಿ:</u>**

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಿರುವ ನಿಯಮಗಳ ರೀತ್ಯಾ 01 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಮತ್ತು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದೊಂದಿಗೆ ನಮೂನೆ-01ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದಿರತಕ್ಕದ್ದು.

**(x) <u>ಕನ್ನಡ ಮಾಧ್ಯಮ ಅಭ್ಯರ್ಥಿ:</u>**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 01ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಶಿಕ್ಷಣಾಧಿಕಾರಿಯವರ ಮೇಲುರುಜು ಹೊಂದಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

**(xi) <u>ಎದ್ದು ಕಾಣುವ ಅಂಗವೈಕಲ್ಯ ಅಭ್ಯರ್ಥಿ (ಅಂಗವಿಕಲ ಅಭ್ಯರ್ಥಿ)</u>**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಉಪ ನಿಯಮ 02(ಕೆ)(ii) ರಲ್ಲಿ ನಿರ್ದಿಷ್ಟಪಡಿಸಿರುವ ಕ್ರಮ ಸಂಖ್ಯೆ: (i) ರಿಂದ (vii)ರ ವರೆಗಿನ (Blindness, Low vision, Leprosy cured, Hearing impairment, Locomotor disability, Mental retardation and Mental Illness) ವೈಕಲ್ಯತೆಯ ಶೇ.40ರಷ್ಟು ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು. ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19/11/2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

**12. <u>ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಗಳು:</u>**

ಸರ್ಕಾರದ ಆದೇಶ ಸಂಖ್ಯೆ: ಸಿಆಸಿಇ 23 ಸೆನೆನಿ 99, ದಿನಾಂಕ 23/11/2000 ಮತ್ತು ತಿದ್ದುಪಡಿ ಆದೇಶ ಸಂಖ್ಯೆ ಸಿಆಸಿಇ 252 ಸೆನೆನಿ 2020 (ಭಾಗ-1), ದಿನಾಂಕ: 07/07/2021 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ_(ಆದರೆ ಈ ನಿಯಮಗಳು ಜಾರಿಯಾಗುವ 25 ವರ್ಷಕ್ಕೆ ಮುನ್ನ ನಿರಾಶ್ರಿತರಾದ_ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ

ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

**13. <u>ತೃತೀಯ ಲಿಂಗ ಅಭ್ಯರ್ಥಿಗಳಿಗೆ:</u>**

ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸನೆನಿ 2020 ದಿನಾಂಕ: 06/07/2021 ರನ್ವಯ ರಾಜ್ಯ ಸಿವಿಲ್ ಸೇವೆಗಳ ನೇಮಕಾತಿಯಲ್ಲಿ ಎಲ್ಲಾ ಗುಂಪಿನ ಹುದ್ದೆಗಳಿಗೆ ಎಲ್ಲಾ ಪ್ರವರ್ಗಗಳಿಗೆ ಶೇ.1ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ಆ ಹುದ್ದೆಗಳನ್ನು ಸರ್ಕಾರದ ಆದೇಶ ದಿನಾಂಕ:14/07/2021 ರಲ್ಲಿ ಸಮತಳ ಮೀಸಲಾತಿಯಲ್ಲಿ ಗುರುತಿಸಲಾಗಿರುತ್ತದೆ ಹಾಗೂ ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಅಧಿಸೂಚನೆಯನ್ವಯ ಕೇಂದ್ರ ಸರ್ಕಾರವು ಹೊರಡಿಸಿರುವ ತೃತೀಯ ಲಿಂಗ ವ್ಯಕ್ತಿಗಳ (ರಕ್ಷಣಾ ಹಕ್ಕುಗಳು) ನಿಯಮಗಳು, 2019 ರನ್ವಯ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆಯತಕ್ಕದ್ದು. ಸದರಿ ಪ್ರಮಾಣ ಪತ್ರ ಹೊಂದಿರದಿದ್ದಲ್ಲಿ ತೃತೀಯ ಲಿಂಗದ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ.

**14. <u>ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ</u>**

ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ "ಹೌದು ಅಥವಾ ಇಲ್ಲ" ಎಂಬುದನ್ನು ಅಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ ಪಡೆಯುವ "ನಿರಾಕ್ಷೇಪಣಾ ಪತ್ರ"ವನ್ನು ಸಲ್ಲಿಸತಕ್ಕದ್ದು.

**ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.**

**15. <u>ಅರ್ಹತಾ ಷರತ್ತುಗಳು:</u>**

01. ಭಾರತೀಯ ನಾಗರೀಕನಾಗಿರತಕ್ಕದ್ದು.
02. ಆಧಾರ್ ಕಾರ್ಡ್‌ನ್ನು ಹೊಂದಿರುವುದು.
03. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿ ಪಡೆಯದೆ ನೇಮಕಾತಿಗೆ ಅರ್ಹರಾಗುವುದಿಲ್ಲ.
04. ಅಭ್ಯರ್ಥಿಯು ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
05. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ ಮತ್ತು ನೇಮಕಾತಿ ಪ್ರಾಧಿಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**16. <u>ವಿಶೇಷ ಸೂಚನೆಗಳು</u>**

- ಅರ್ಜಿ ಸಲ್ಲಿಸುವಾಗ ಕೊನೆ ಕ್ಷಣದಲ್ಲಿ ಒತ್ತಡವನ್ನು ತಪ್ಪಿಸಲು, ಅಭ್ಯರ್ಥಿಗಳು ಸಾಕಷ್ಟು ಮುಂಚಿತವಾಗಿಯೇ ಅರ್ಜಿ ಸಲ್ಲಿಸುವುದು ಸೂಕ್ತ. ಕರ್ನಾಟಕ ಲೋಕಾಯುಕ್ತ ಸಂಸ್ಥೆಯ

ವೆಬ್‌ಸೈಟ್ (ಜಾಲತಾಣ) **ದಿನಾಂಕ: 17/08/2026ರ** ರಾತ್ರಿ 11:59 ಘಂಟೆಯೊಳಗೆ ಸಲ್ಲಿಸಿದ ಅರ್ಜಿಗಳನ್ನಷ್ಟೇ ಅಂಗೀಕರಿಸುತ್ತದೆ.

- ಅರ್ಜಿಯಲ್ಲಿ ಸಂಪರ್ಕದ ಉದ್ದೇಶಕ್ಕೆ ಸಂಬಂಧಿಸಿದಂತೆ ಕೊಟ್ಟಿರುವ ಸೂಕ್ತ ಕಾಲಂಗಳನ್ನು ತುಂಬುವಾಗ ಸಂವಹನಕ್ಕಾಗಿ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐ.ಡಿ. ಅನ್ನು ಸರಿಯಾಗಿ ನಮೂದಿಸತಕ್ಕದ್ದು. ಸರಿಯಾದ ಮಾಹಿತಿ ಒದಗಿಸದೇ ಮೊಬೈಲ್ ಸಂಖ್ಯೆ/ಇ-ಮೇಲ್ ಸಂದೇಶ ಬರದಿದ್ದಲ್ಲಿ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ.
- ಅಭ್ಯರ್ಥಿ ವಿವರ ಅಪೂರ್ಣವಾಗಿರುವ, ಫೋಟೋ ಮತ್ತು ಸಹಿ ಅಪ್-ಲೋಡ್ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಪ್ರಸ್ತುತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಾದ ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿ. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿಗಳನ್ನು ಅಪ್-ಲೋಡ್ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಯು ತಮ್ಮ ಮಾಹಿತಿಗಾಗಿ ಭರ್ತಿಮಾ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಳ್ಳುವ ವರೆಗೆ ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಕೋರುವ ವಿವಿಧ ಮೀಸಲಾತಿಗೆ ಸಂಬಂಧಪಟ್ಟಂತೆ ಅಗತ್ಯ ದಾಖಲೆ/ಪ್ರಮಾಣ ಪತ್ರಗಳನ್ನು ಸೂಕ್ತ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಅಥವಾ ಅಭ್ಯರ್ಥಿಯು ಅರ್ಜಿ ಸಲ್ಲಿಸುವ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರಬೇಕು ಹಾಗೂ ಚಾಲ್ತಿಯಲ್ಲಿರಬೇಕು. ಸದರಿ ದಾಖಲೆಗಳನ್ನು ಬೆರಳಚ್ಚು ಪರೀಕ್ಷೆಗೆ ಹಾಜರಾದಾಗ ಪರಿಶೀಲನೆಗಾಗಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಜಾತಿ ಮೀಸಲಾತಿ / ಗ್ರಾಮೀಣ ಮೀಸಲಾತಿ/ ಕನ್ನಡ ಮಾಧ್ಯಮ ಮೀಸಲಾತಿ/ ಎದ್ದು ಕಾಣುವ ಅಂಗವೈಕಲ್ಯ ಅಭ್ಯರ್ಥಿ ಮೀಸಲಾತಿ ಕೋರಿದ್ದಲ್ಲಿ ಈ ಸಂಸ್ಥೆಯ ಜಾಲತಾಣದಲ್ಲಿ (ವೆಬ್‌ಸೈಟ್) ಪ್ರಕಟಿಸಿರುವ ನಿಗಧಿತ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ನೇಮಕಾತಿಯು ತಾತ್ಕಾಲಿಕವಾಗಿದ್ದು, ಆಯ್ಕೆಯಾಗಿ ನೇಮಕಗೊಂಡ ಅಭ್ಯರ್ಥಿಗಳು 2 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.
- ಆಯ್ಕೆಯಾದ ಅಭ್ಯರ್ಥಿಗಳನ್ನು ಈ ಸಂಸ್ಥೆಯ ಯಾವು ಶಾಖಾ ಕಚೇರಿಗಳಿಗೆ ಕೂಡ ನೇಮಕ/ವರ್ಗಾವಣೆ ಮಾಡಬಹುದಾಗಿದೆ.
- ಈ ಅಧಿಸೂಚನೆಯ ಪ್ರಕಾರ ನೇಮಕಗೊಂಡವರು ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ(ಸ್ಪೆಷಲ್) 04 ಪಿಇಟಿ 2005, ದಿನಾಂಕ:31-6-2006ರಲ್ಲಿ ತಿಳಿಸಿದಂತೆ ಕಾಂಟ್ರಿಬ್ಯೂಟರಿ ಪಿಂಚಣಿ ಸ್ಕೀಂಗೆ ವಂತಿಗೆ ನೀಡಬೇಕಾಗುತ್ತದೆ.
- ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಥವಾ ಇನ್ನಾವುದೇ ನಿಯಮಗಳ ಪ್ರಕಾರ ಅಭ್ಯರ್ಥಿಯು ಅನರ್ಹರಾಗಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅಭ್ಯರ್ಥಿಯ ತನ್ನ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರವನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
- ಅಭ್ಯರ್ಥಿಯು ಸ್ವಯಂ ದೃಢೀಕೃತ ಛಾಯಾಪ್ರತಿಗಳ (ದೃಢೀಕೃತ ಜೆರಾಕ್ಸ್ ಪ್ರತಿಗಳ) ಗುಚ್ಛದೊಂದಿಗೆ ಎಲ್ಲಾ ಮೂಲ ಅರ್ಹತಾ ಪತ್ರಗಳನ್ನು ಅಂದರೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/10ನೇ ತರಗತಿ, ಪದವಿ ಪೂರ್ವ ಶಿಕ್ಷಣದ ಅಂಕಪಟ್ಟಿ, ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು, ಜಾತಿ ಪ್ರಮಾಣ ಪತ್ರಗಳು ಯಾವುದೇ ಮೀಸಲಾತಿ ಕ್ಲೇಮ್ ಮಾಡಿರುವ ಪ್ರಮಾಣ ಪತ್ರಗಳು ಮತ್ತು ಮೂರು ನಡತೆ ಪ್ರಮಾಣ ಪತ್ರಗಳನ್ನು (ಒಂದು ನಡತೆ ಪ್ರಮಾಣ ಪತ್ರವನ್ನು ಅಂತಿಮವಾಗಿ ವ್ಯಾಸಂಗ ಮಾಡಿದ ಶಿಕ್ಷಣ ಸಂಸ್ಥೆಯಿಂದಲೂ, ಇನ್ನೆರಡು ನಡತೆ ಪ್ರಮಾಣ

ಪತ್ರಗಳನ್ನು ಅಭ್ಯರ್ಥಿಯ ಸಂಬಂಧಿಕರಲ್ಲದ ಗೌರವಾನ್ವಿತ ವ್ಯಕ್ತಿಗಳಿಂದಲೂ ಪಡೆದು) ಪರಿಶೀಲನೆಗಾಗಿ ಹಾಜರಾಗುವಾಗ ಹಾಜರುಪಡಿಸತಕ್ಕದ್ದು.

- ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗೆ 1:10 ಅನುಪಾತದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತಾ ಪರೀಕ್ಷೆಯನ್ನು ಈ ಸಂಸ್ಥೆಯ ಕೇಂದ್ರ ಕಚೇರಿ ಬೆಂಗಳೂರಿನಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಗೆ ಸಮಯಕ್ಕೆ ಸರಿಯಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
- ಅರ್ಹತಾ ಪರೀಕ್ಷೆಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಅಧಿಕೃತ ವೆಬ್‌ಸೈಟ್ (ಜಾಲತಾಣ) ನಲ್ಲಿ ಪ್ರಕಟಿಸಲಾಗುವುದು. ಅರ್ಹ ಅಭ್ಯರ್ಥಿಗಳ ಮೊಬೈಲ್‌ಗೆ ಸಂದೇಶ ಅಥವಾ ಇ-ಮೇಲ್ ಮೂಲಕ ಮಾಹಿತಿಯನ್ನು ನೀಡಲಾಗುವುದು. ಅರ್ಹತಾ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕರೆ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಹತಾ ಪರೀಕ್ಷೆ ದಿನ ಹಾಜರುಪಡಿಸತಕ್ಕದ್ದು.
- ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲ ಪಡೆಯುವ ಪ್ರಯತ್ನ ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು / ಅಭ್ಯರ್ಥಿಕೆಯನ್ನು ಅನರ್ಹಗೊಳಿಸಲಾಗುವುದು.
- ಈ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448/2025, 17968/2025 ಮತ್ತು 3145/2023ಗಳ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.
- ಮೇಲ್ಕಂಡ ಹುದ್ದೆಗಳಿಗೆ ಸಂಬಂಧಿಸಿದಂತೆ ಆನ್-ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಭ್ಯರ್ಥಿಯು ಮೇಲೆ ಸೂಚಿಸಲಾದಂತಹ ತನ್ನ ವಿದ್ಯಾರ್ಹತೆ ಹಾಗೂ ಇತರೇ ಮಾನದಂಡಗಳನ್ನು ಪೂರ್ಣಗೊಳಿಸಲಾಗಿದೆಯೆಂದು ಹಾಗೂ ತಾನು ಒದಗಿಸಿರುವ ಎಲ್ಲಾ ವಿವರಗಳು ಎಲ್ಲಾ ಆಯಾಮಗಳಲ್ಲಿಯೂ ಸರಿಯಾಗಿವೆ ಎಂದು ಖಚಿತ ಪಡಿಸತಕ್ಕದ್ದು. ನೇಮಕಾತಿಯ ಯಾವುದೇ ಹಂತದಲ್ಲಿ, ಅಭ್ಯರ್ಥಿಯು ವಿದ್ಯಾರ್ಹತೆಯ ಮಾನದಂಡಗಳನ್ನು ಪೂರ್ಣಗೊಳಿಸಿಲ್ಲವೆಂದು ಅಥವಾ ಆತ/ಆಕೆ ಯಾವುದೇ ಪ್ರಮುಖ ವಾಸ್ತವಾಂಶಗಳನ್ನು ಮರೆಮಾಚಿರುತ್ತಾನೆ/ಳೆಂದು, ತಿರುಚಿರುತ್ತಾನೆ/ಳೆಂದು, ಮೊಟಕುಗೊಳಿಸಿರುತ್ತಾನೆ/ಳೆಂದು ಕಂಡು ಬಂದ ಸಂದರ್ಭದಲ್ಲಿ ಆತನ/ಆಕೆಯ ಅಭ್ಯರ್ಥಿಕೆಯನ್ನು ರದ್ದುಗೊಳಿಸಲಾಗುವುದು. ಈ ಯಾವುದೇ ನ್ಯೂನ್ಯತೆಗಳು ನೇಮಕಾತಿಯ ನಂತರ ಕಂಡುಬಂದರೂ ಸಹ ಮತ್ತು ತಪ್ಪಾದ, ಅಪೂರ್ಣವಾದ ಅಥವಾ ಸರಿಯಿಲ್ಲದ ಮಾಹಿತಿಯನ್ನು ಒದಗಿಸುವುದು ಅನರ್ಹತೆಗೆ ಕಾರಣವಾಗುವುದು ಮಾತ್ರವಷ್ಟೆ ಅಲ್ಲದೇ, ಅಂತಹ ಮಾಹಿತಿಯನ್ನು ಒದಗಿಸಿದ್ದಕ್ಕಾಗಿ ಕ್ರಿಮಿನಲ್ ಮೊಕದ್ದಮೆಗೆ ಹೊಣೆಗಾರನಾಗುತ್ತಾನೆ/ಳೆ.

**ಸಹಿ/-**
**ನಿಬಂಧಕರು,**
**ಕರ್ನಾಟಕ ಲೋಕಾಯುಕ್ತ,**
**ಬೆಂಗಳೂರು.**

## (ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ

## (ನಿಯಮ 3ಎ (2) (3) ನೋಡಿ)

## ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

### ಪ್ರಮಾಣ ಪತ್ರ

....................................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ........................ಜಿಲ್ಲೆಯ/ವಿಭಾಗದ

....................................................................... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ/ಶ್ರೀಮತಿ..................... ಎಂಬುವವರ ಮಗ/ಮಗಳಾದ ಶ್ರೀ / ಶ್ರೀಮತಿ ................................................. ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* ........................... ಮತ್ತು/ಅಥವಾ ಅವನ* / ಅವಳ* ಕುಟುಂಬವು .................................. ರಾಜ್ಯ / ಕೇಂದ್ರಾಡಳಿತ ಪ್ರದೇಶದ .............................. ಜಿಲ್ಲಾ / ವಿಭಾಗದ ......................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ

ತಹಶೀಲ್ದಾರರು

ಸ್ಥಳ :

ದಿನಾಂಕ :

ಪದನಾಮ

ಕಛೇರಿಯ ಮೊಹರಿನೊಂದಿಗೆ

ರಾಜ್ಯ/ಕೇಂದ್ರಾಡಳಿತ ಪ್ರದೇಶ*

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.
ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 /2/ 76-ಎಸ್‌ಸಿಟಿ-1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ
ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಇ**

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ

.................................................... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ/ಶ್ರೀಮತಿ ....................
ಇವರ ಮಗ / ಮಗಳು / ಪತ್ನಿ /ಪತಿಯಾದ ಶ್ರೀ / ಶ್ರೀಮತಿ ..............................................................
ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .................................... ಜಾತಿಯ .........................................
ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ............................ ತಾಲ್ಲೂಕು
ಕಛೇರಿಯ ಮೊಹರು

**(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ – ಎಫ್**

**(ನಿಯಮ 3ಎ (2) (3)ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು**

**ಜಾತಿ ಪ್ರಮಾಣ ಪತ್ರ**

.........................................................ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ......................................................... ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ................................ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು :

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು :

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ :

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100-83900/-ಪ್ರಾರಂಬಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎಂಟು ಲಕ್ಷ ಮೀರುವುದಿಲ್ಲವೆಂದು :

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ................................ ಇವರು ....................................... ಜಾತಿಗೆ ....................................... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್ ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ................................ (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ :

ದಿನಾಂಕ :

ತಹಶೀಲ್ದಾರರು

............................ ತಾಲ್ಲೂಕು

ಕಛೇರಿಯ ಮೊಹರು

## ಅನುಬಂಧ- 1

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ (ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು,
.................... ತಾಲ್ಲೂಕು,
.................... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ ........................................................ ಎಂಬುವವರ
ಮಗ/ಮಗಳು/ಪತಿ/ಪತ್ನಿ............................. ಆದ ನಾನು
ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
   ಇವರ ಒಟ್ಟು ವಾರ್ಷಿಕ
   ಆದಾಯ ಎಲ್ಲಾ ಮೂಲಗಳಿಂದ :

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿ ಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)
(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ.............................................................................. ಎಂಬುವವರ ಮಗ/ಮಗಳು/ಪತಿ/ಪತ್ನಿ /ಶ್ರೀ/
ಶ್ರೀಮತಿ/ಕುಮಾರಿ............................... ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ........................... ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ....................................................... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................ ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ-1:** ಇದರಲ್ಲಿ ಉಪಯೋಗಿಸಲಾದ **"ಸಾಮಾನ್ಯ ನಿವಾಸಿ"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ

ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ-2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## <u>ನಮೂನೆ-2</u>

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ................................................ ರವರ ಮಗ/ ಮಗಳು/ ಪತ್ನಿ/ ಶ್ರೀ/ ಶ್ರೀಮತಿ/ ಕುಮಾರಿ ............................ ಜಿಲ್ಲೆ ...................... ತಾಲ್ಲೂಕು ...................... ಗ್ರಾಮದಲ್ಲಿ ......................ವಾಸವಾಗಿರುವ ಇವರು ......................ನೇ ತರಗತಿಯಿಂದ ......................ನೇ ತರಗತಿಯವರೆಗೆ ............................ ಜಿಲ್ಲೆ ...................... ತಾಲ್ಲೂಕು ......................ಪಟ್ಟಣ ............................ ಶಾಲೆಯಲ್ಲಿ ವ್ಯಾಸಂಗ ಮಾಡಿ ...................ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ

ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು

ಕ್ಷೇತ್ರ ಶಿಕ್ಷಣಾಧಿಕಾರಿ

---

## <u>ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ</u>

ಶ್ರೀ / ಶ್ರೀಮತಿ ................................................ರವರ ಮಗ/ಮಗಳು/ಪತ್ನಿ/ಶ್ರೀಮತಿ/ ಕುಮಾ ............................ ಜಿಲ್ಲೆ ...................... ತಾಲ್ಲೂಕು ...................... ಗ್ರಾಮದಲ್ಲಿ ...................... ವಾಸವಾಗಿರುವ ಇವರು ...................... ನೇ ತರಗತಿಯಿಂದ ............................ ನೇ ತರಗತಿಯವರೆಗೆ ...................... ಶೈಕ್ಷಣಿಕ ವರ್ಷದಿಂದ ...................... ಶೈಕ್ಷಣಿಕ ವರ್ಷದವರೆಗೆ...................... ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ

ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲು ರುಜು

ಕ್ಷೇತ್ರ ಶಿಕ್ಷಣಾಧಿ ,

ಕಛೇರಿಯ ಮೊಹರು

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸನೆನಿ 2005, ದಿನಾಂಕ: 19.11.2005**

## CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………… son/ wife / daughter of Shri ……………………………………….. ……………………. Age ………………………… old, male / female, Registration No …………………………… is a case of ……………..... He / She is physically disabled/visual disabled/speech & hearing disabled and has ………………….. % (……………………percent) permanent (physical impairment visual impairment speech & hearing impairment) in relation of his / her ……………………………

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ……………months/years.

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

**PR-505**

# ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಡಾ||ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು-560001

ಅಧಿಸೂಚನೆ ಸಂಖ್ಯೆ:ಕಲೋ/ಸಿಬ್ಬಂದಿ-3/02/ನೇನೇ/ಸಿಸಿಟಿ/2026-27(ಕೆಕೆಆರ್) ದಿನಾಂಕ:- 14/07/2026.

## <u>ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಾಗಿ ಅಭ್ಯರ್ಥಿಗಳ ನೇಮಕಾತಿ</u>

**ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಗ್ರೂಪ್-ಸಿ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದಲ್ಲಿ ಖಾಲಿ ಇರುವ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಯನ್ನು ನೇರ ನೇಮಕಾತಿಯಿಂದ ತುಂಬುವ ಬಗ್ಗೆ.**

***************

- **ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 17/07/2026**
- **ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17/08/2026 (ಮಧ್ಯರಾತ್ರಿ 11:59 ಗಂಟೆಯವರೆಗೆ)**

**<u>ನೇಮಕಾತಿ ವಿಧಾನ</u>** : ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಗ್ರೂಪ್-'ಸಿ' ವೃಂದದ ಕಲ್ಯಾಣ ಕರ್ನಾಟಕ (ಸ್ಥಳೀಯ ವೃಂದ) ದಲ್ಲಿ ಖಾಲಿಯಿರುವ 1 ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಯನ್ನು ತುಂಬಲು ಕರ್ನಾಟಕ ಲೋಕಾಯುಕ್ತ (ವೃಂದ, ನೇಮಕಾತಿ ಮತ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಷರತ್ತು) ನಿಯಮಗಳು 1988 ರ ಅನುಬಂಧ-'ಎ' ಮತ್ತು ಕೆ.ಸಿ.ಎಸ್ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 19 ಎಸ್ ಸಿ ಆರ್ 2006 ದಿನಾಂಕ:14-08-2006 ರನ್ವಯ ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ವೆಬ್‌ಸೈಟ್ **URL link** https://lokayukta.karnataka.gov.in ನಲ್ಲಿ (on-line) ಮೂಲಕ ಸಲ್ಲಿಸಲು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆನ್-ಲೈನ್ (on-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

1. **ಕರ್ನಾಟಕ ಲೋಕಾಯುಕ್ತ (ವೃಂದ, ನೇಮಕಾತಿ ಮತ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಷರತ್ತು) ನಿಯಮಗಳು 1988 ಹಾಗೂ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದಾರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ ಮತ್ತು ನಿಯಮಗಳು 2013 ಮತ್ತು ಆದೇಶ ಸಂಖ್ಯೆ:ಡಿಪಿಎಆರ್ 06 ಪಿಎಲ್‌ಎಕ್ಸ್ 2012, ದಿನಾಂಕ:06-11-2013 ರನ್ವಯ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ನೇರ ನೇಮಕಾತಿಯಿಂದ ತುಂಬಬೇಕಾಗಿರುವ ಗ್ರೂಪ್-ಸಿ ವೃಂದದ ಕಲ್ಯಾಣ ಕರ್ನಾಟಕ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಯ ವಿವರ:**
2. **<u>ಕ್ಲರ್ಕ್-ಕಂ-ಟೈಪಿಸ್ಟ್:- 01 ಹುದ್ದೆ</u>**

   ವೇತನ ಶ್ರೇಣಿ: 34100-800-35700-900-39300-1000-43300-1125-47800-1250-52800-1375-58300-1500-64300-1650-67600

**3. ಹುದ್ದೆಯ ವರ್ಗೀಕರಣ:-**

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ಬೆಂಗಳೂರು, ದಿನಾಂಕ:13-05-2026 & ದಿನಾಂಕ: 25-05-2026 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023, ಬೆಂಗಳೂರು ದಿನಾಂಕ:08-03-2023ರ ಪ್ರಕಾರ ಹುದ್ದೆಯನ್ನು ಕೆಳಕಂಡಂತೆ ವರ್ಗೀಕರಿಸಲಾಗಿದೆ.

**ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗಳ**

**ವರ್ಗೀಕರಣ: 01**

| ಮೀಸಲಾತಿ | ಸಮತಳ ಮೀಸಲಾತಿ | | | | | | | | |
|---|---|---|---|---|---|---|---|---|---|
| | ಇತರೆ | ಮ.ಅ | ಗ್ರಾ. ಅ | ಮಾ.ಸೈ | ಕ.ಮಾ.ಅ | ಯೋ. ನಿ. ಅ | ಅಂ. ಅ | ತೃ. ಲಿಂ. | ಒಟ್ಟು |
| ಪರಿಶಿಷ್ಟ ಜಾತಿ | - | - | 01 | - | - | - | - | - | 01 |
| **ಒಟ್ಟು** | **-** | **-** | **01** | **-** | **-** | **-** | **-** | **-** | **01** |

**4. ಶೈಕ್ಷಣಿಕ ವಿದ್ಯಾರ್ಹತೆ :-**

1. ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ.
2. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ

(ಮೂಲ ಅಂಕಪಟ್ಟಿಯನ್ನು ಅರ್ಹತಾ ಪರೀಕ್ಷೆಗೆ ಕರೆ ಬಂದಾಗ ಪರಿಶೀಲನೆಗಾಗಿ ಹಾಜರುಪಡಿಸುವುದು).

**ಸೂಚನೆ:**

3. ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿಯ ಕಮರ್ಷಿಯಲ್ ಪ್ರಾಕ್ಟೀಸ್‌ನ ಬೆರಳಚ್ಚು ವಿಷಯಗಳ ತೇರ್ಗಡೆಯ ತತ್ಸಮಾನತೆ ಬಗ್ಗೆ ಸರ್ಕಾರದ ಅದೇಶ ಸಂಖ್ಯೆ: ಇಡಿ 174 ಟಿಪಿಇ 2005 ಬೆಂಗಳೂರು, ದಿನಾಂಕ:09ನೇ ನವೆಂಬರ್ 2006 ರನ್ವಯ ಪರಿಗಣಿಸಲಾಗುವುದು. (ಸದರಿ ಸರ್ಕಾರದ ಆದೇಶವನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಜಾಲತಾಣದಲ್ಲಿ (ವೆಬ್ ಸೈಟ್) ಅಧಿಸೂಚನೆ ವಿಭಾಗದಲ್ಲಿ ವೀಕ್ಷಿಸಬಹುದು)

4. ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಯ ತತ್ಸಮಾನ ವಿದ್ಯಾರ್ಹತೆಯನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ:27/02/2018ರಲ್ಲಿ ತಿಳಿಸಿರುವಂತೆ ಪರಿಗಣಿಸಲಾಗುವುದು. (ಸದರಿ ಸರ್ಕಾರದ ಸುತ್ತೋಲೆಯನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಜಾಲತಾಣದಲ್ಲಿ (ವೆಬ್ ಸೈಟ್) ಅಧಿಸೂಚನೆ ವಿಭಾಗದಲ್ಲಿ ವೀಕ್ಷಿಸಬಹುದು.)

**5. ನೇಮಕಾತಿ ಪ್ರಕ್ರಿಯೆ:**

i) ಕರ್ನಾಟಕ ಲೋಕಾಯುಕ್ತ (ವೃಂದ, ನೇಮಕಾತಿ ಮತ್ತು ಸಿಬ್ಬಂದಿ ಹಾಗೂ ಅಧಿಕಾರಿಗಳ ಸೇವಾ ಷರತ್ತು) (ತಿದ್ದುಪಡಿ) ನಿಯಮಗಳು 2005ರ ಅನುಬಂಧ-'ಎ' ರಲ್ಲಿ ತಿಳಿಸಿದಂತೆ ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳ ಮತ್ತು ಮೀಸಲಾತಿ ಆಧಾರದ ಮೇರೆಗೆ ಶ್ರೇಯಾಂಕದಲ್ಲಿರುವ ಅಭ್ಯರ್ಥಿಗಳ ಪೈಕಿ 1:10 ಅನುಪಾತದಲ್ಲಿ ಅರ್ಹತಾ ಪಟ್ಟಿಯನ್ನು ತಯಾರಿಸಿ, ಸದರಿ ಪಟ್ಟಿಯಲ್ಲಿ ಇರುವಂತಹ ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ಅರ್ಹತಾ ಪರೀಕ್ಷೆ ನಡೆಸಲಾಗುವುದು. ಸದರಿ ಅರ್ಹತಾ ಪರೀಕ್ಷೆಗೆ ನಿಗಧಿಪಡಿಸಲಾದ ಗರಿಷ್ಠ 20 ಅಂಕಗಳಿಗೆ ಅಭ್ಯರ್ಥಿಯು ಕನಿಷ್ಠ ಶೇ.50 ರಷ್ಟು ಅಂಕಗಳನ್ನು ಪಡೆದಲ್ಲಿ ಮಾತ್ರ ಆಯ್ಕೆ ಪಟ್ಟಿಗೆ ಪರಿಗಣಿಸಲಾಗುವುದು.

ii) ಅರ್ಹತಾ ಪರೀಕ್ಷೆಯನ್ನು ಗಣಕಯಂತ್ರದ ಮೂಲಕ ಕೈಗೊಳ್ಳಲಾಗುವುದು.

iii) ಈ ಅಧಿಸೂಚನೆಗೆ ಶೀಘ್ರಲಿಪಿಗಾರರು ಮತ್ತು ಬೆರಳಚ್ಚುಗಾರರ ಹುದ್ದೆಗಳಿಗೆ ನೇಮಕಾತಿ ನಿಯಮಗಳು 1983 ಅನ್ವಯಿಸುವುದಿಲ್ಲ.

**6. <u>ಅರ್ಜಿ ಶುಲ್ಕ</u>:**

| | |
|---|---|
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

(ಅ) ಆನ್-ಲೈನ್ ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳು ಕಂಡುಬಂದಲ್ಲಿ ಹೆಲ್ಪ್-ಲೈನ್ ಸಂಖ್ಯೆ: 080-22011297ಗೆ ಕಚೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

(ಆ) ಅಭ್ಯರ್ಥಿಗಳಿಗೆ ನೀಡಿರುವ ಸೂಚನೆಗಳಲ್ಲಿ ಮೀಸಲಾತಿ, ವಿದ್ಯಾರ್ಹತೆ ಮುಂತಾದ ವಿಷಯಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಕೆಲಸದ ವೇಳೆಯಲ್ಲಿ ದೂರವಾಣಿ ಸಂಖ್ಯೆ:080-22011210 / 080-22011279 ಗೆ ಸಂಪರ್ಕಿಸಬಹುದಾಗಿದೆ.

- **ಆನ್-ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭದ ದಿನಾಂಕ: 17/07/2026**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 17/08/2026 (ಮಧ್ಯರಾತ್ರಿ 11:59 ಗಂಟೆಯವರೆಗೆ)**

(ಉ) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

(i) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು, ಗರಿಷ್ಠ 50 ಕೆ.ಬಿ ಅಳತೆಯಿರುವ 5 ಸೆಂ.ಮೀ. ಉದ್ದ x 3.6 ಸೆಂ.ಮೀ ಅಗಲವಿರಬೇಕು ಹಾಗೂ ಅದು ಜೆಪಿಜಿ ನಮೂನೆಯಲ್ಲಿರಬೇಕು. ಭಾವಚಿತ್ರದ ಹಿನ್ನೆಲೆ ಬಿಳಿ ಬಣ್ಣದಾಗಿರಬೇಕು.

(ii) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು.

(iii) ಅಭ್ಯರ್ಥಿಯು ಬಿಳಿ ಕಾಗದದ ಮೇಲೆ ಕಪ್ಪು ಬಾಲ್ ಪಾಯಿಂಟ್ ಪೆನ್‌ನಲ್ಲಿ (2.5 ಸೆಂ.ಮೀ ಅಗಲ x 7.5 ಸೆಂ.ಮೀ. ಉದ್ದವಿರುವ ಗರಿಷ್ಠ 25 ಕೆ.ಬಿ ಪ್ರಮಾಣವಿರುವಂತೆ) ತಮ್ಮ ಸಹಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು ಹಾಗೂ ಅದು ಜೆಪಿಜಿ ನಮೂನೆಯಲ್ಲಿರಬೇಕು.

(iv) ಅಭ್ಯರ್ಥಿಯು ಪ್ರಸ್ತುತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಾದ ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿ. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿಗಳನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು.

**7. <u>ವಯೋಮಿತಿ</u>:-**

1. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರಿಗೆ ಕನಿಷ್ಠ 18 ವರ್ಷಗಳು ತುಂಬಿರಬೇಕು ಹಾಗೂ
2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 262 ಸೇನೆನಿ 2025, ದಿನಾಂಕ:29/01/2026ರಲ್ಲಿ ಆದೇಶಿಸಿರುವಂತೆ ಈ ಅಧಿಸೂಚನೆಯಲ್ಲಿ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ 05 ವರ್ಷಗಳ ಸಡಿಲಿಕೆಯನ್ನು ನೀಡಿ ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ನಿಗಧಿಪಡಿಸಲಾಗಿರುತ್ತದೆ.

| | | |
|---|---|---|
| ಅ | ಪ.ಜಾ/ಪ.ಪಂ/ಪ್ರ-1 | 45 ವರ್ಷ |
| ಆ | ಪ್ರವರ್ಗ-II (ಎ),II (ಬಿ), III (ಎ), III (ಬಿ) | 43 ವರ್ಷ |
| ಇ | ಸಾಮಾನ್ಯ ಅರ್ಹತೆ | 40 ವರ್ಷ |

ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ 6ನೇ ನಿಯಮದ ಅನುಸಾರ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟು ಮಟ್ಟಿಗೆ ಹೆಚ್ಚಿಸಲಾಗುವುದು. ಕನಿಷ್ಟ ಮತ್ತು ಗರಿಷ್ಠ ವಯೋಮಿತಿಯು ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವನ್ನು ಆಧರಿಸಿರುತ್ತದೆ.

(I) ಅಭ್ಯರ್ಥಿಯು, ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ಸ್ಥಳೀಯ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(II) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳು ಆಗುವುದೋ ಅಷ್ಟು ವರ್ಷಗಳು.

<u>ವಿವರಣೆ:</u> (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ, ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು (ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂಥಹ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಮೇಲ್ಕಂಡ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಲ್ಲಿ ಬಿಡುಗಡೆಯಾದವನು

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇನೆಯಿಂದ ಬಿಡುಗಡೆಹೊಂದಿದ ವ್ಯಕ್ತಿ

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು

(1)ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

(2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿತ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

(3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

(iii) ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ ಅಭ್ಯರ್ಥಿಯಾಗಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(iv) ಅಭ್ಯರ್ಥಿಯು ಗ್ರಾಮ ಸಮೂಹ ಪರಿಶೀಲಕರಾಗಿ ಕಾರ್ಯನಿರ್ವಹಿಸಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ

(v) ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ 10 ವರ್ಷಗಳ ವಯೋ- -ಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(vi) ಅಭ್ಯರ್ಥಿಯು ಜನಗಣತಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ, ಅವರು ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 05 ವರ್ಷಗಳು, ಇವೆರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(vii) ಅಭ್ಯರ್ಥಿಯು ವಿಧವೆಯಾಗಿರುವ ಸಂದರ್ಭದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(viii) ಅಭ್ಯರ್ಥಿಯು ಜೀತ ಕಾರ್ಮಿಕರಾಗಿದ್ದಲ್ಲಿ, 10 ವರ್ಷಗಳ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

**(ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣಪತ್ರದಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಈ ಹೊರತು ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ).**

8. **ಮೀಸಲಾತಿ ಕೋರುವ ಅಭ್ಯರ್ಥಿಗಳು :-**

ಪರಿಶಿಷ್ಟ ಜಾತಿ (ಪ್ರವರ್ಗ-ಎ/ಬಿ/ಸಿ)/ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಪ್ರವರ್ಗಗಳ ಅಡಿಯಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಕರ್ನಾಟಕ ಸರ್ಕಾರವು ನಿಗಧಿಪಡಿಸಿದ ನಮೂನೆ-ಡಿ, ನಮೂನೆ-ಇ ಮತ್ತು ನಮೂನೆ-ಎಫ್ ರಲ್ಲಿ ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು ಹಾಗೂ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಸಿಂಧು ಆಗಿರಬೇಕು.

9. **ಗ್ರಾಮೀಣ ಅಭ್ಯರ್ಥಿ:**

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಿರುವ ನಿಯಮಗಳ ರೀತ್ಯಾ 01 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ-2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಮತ್ತು ಮೂಲ ದಾಖಲಾತಿ ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು.

10. **ಎದ್ದು ಕಾಣುವ ಅಂಗವೈಕಲ್ಯ ಅಭ್ಯರ್ಥಿ (ಅಂಗವಿಕಲ ಅಭ್ಯರ್ಥಿ)**

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಉಪ ನಿಯಮ 02(ಕೆ)(ii) ರಲ್ಲಿ ನಿರ್ದಿಷ್ಟಪಡಿಸಿರುವ ಕ್ರಮ ಸಂಖ್ಯೆ: (i) ರಿಂದ (vii)ರ ವರೆಗಿನ (Blindness, Low vision, Leprosy cured, Hearing impairment, Locomotor disability, Mental retardation and Mental Illness) ವೈಕಲ್ಯತೆಯ ಶೇ.40ರಷ್ಟು ಕಡಿಮೆಯಿಲ್ಲದಿರುವ ಅಂಗವಿಕಲ ವ್ಯಕ್ತಿಗಳು. ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ:19/11/2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 115 ಸೆನೆನಿ 2005ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

**11. <u>ಅನುಚ್ಛೇಧ 371(ಜೆ) ರಂತೆ ಹೈದಾರಾಬಾದ್-ಕರ್ನಾಟಕ ಪ್ರದೇಶಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮೀಸಲಾತಿ:</u>**

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದಾರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) (ಅರ್ಹತಾ ಪ್ರಮಾಣ ಪತ್ರಗಳ ನೀಡಿಕೆ) ನಿಯಮಗಳು 2013ಕ್ಕೆ ಸಂಬಂಧಿಸಿದಂತೆ ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನು ಕೋರುವವರು ಸದರಿ ನಿಯಮದಲ್ಲಿ ಗೊತ್ತುಪಡಿಸಿದಂತೆ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ದಿನಾಂಕದಂದು ಅಥವಾ ಅದಕ್ಕೂ ಮುಂಚಿತವಾಗಿಯೇ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರವಾದ ಸಂಬಂಧಪಟ್ಟ ಉಪ-ವಿಭಾಗದ ಸಹಾಯಕ ಆಯುಕ್ತರವರಿಂದ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಈ ನಮೂನೆಯನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಅರ್ಹತಾ ಪ್ರಮಾಣಪತ್ರವನ್ನು ತಿರಸ್ಕರಿಸಲಾಗುವುದು ಹಾಗೂ ಸೇವಾನಿರತ ಅಭ್ಯರ್ಥಿಗಳು ಸ್ವಗ್ರಾಮ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ಅಧಿಸೂಚನೆಯ ಕೊನೆಯ ದಿನಾಂಕದ ಒಳಗಾಗಿ ಪಡೆದಿರಬೇಕು.

**12. <u>ಸರ್ಕಾರಿ ಸೇವೆಯಲ್ಲಿರುವ ನೌಕರರಿಗೆ</u>**

ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ "ಹೌದು ಅಥವಾ ಇಲ್ಲ" ಎಂಬುದನ್ನು ಅಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ ಪಡೆಯುವ "ನಿರಾಕ್ಷೇಪಣಾ ಪತ್ರ"ವನ್ನು ಸಲ್ಲಿಸತಕ್ಕದ್ದು.

**ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು**.

**13. <u>ಅರ್ಹತಾ ಷರತ್ತುಗಳು:</u>**

01. ಭಾರತೀಯ ನಾಗರೀಕನಾಗಿರತಕ್ಕದ್ದು.
02. ಆಧಾರ್ ಕಾರ್ಡ್‌ನ್ನು ಹೊಂದಿರುವುದು.
03. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿ ಪಡೆಯದೆ ನೇಮಕಾತಿಗೆ ಅರ್ಹರಾಗುವುದಿಲ್ಲ.
04. ಅಭ್ಯರ್ಥಿಯು ದೈಹಿಕ ಮತ್ತು ಮಾನಸಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
05. ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ ಮತ್ತು ನೇಮಕಾತಿ ಪ್ರಾಧಿಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

**14. <u>ವಿಶೇಷ ಸೂಚನೆಗಳು</u>**

- ಅರ್ಜಿ ಸಲ್ಲಿಸುವಾಗ ಕೊನೆ ಕ್ಷಣದಲ್ಲಿ ಒತ್ತಡವನ್ನು ತಪ್ಪಿಸಲು, ಅಭ್ಯರ್ಥಿಗಳು ಸಾಕಷ್ಟು ಮುಂಚಿತವಾಗಿಯೇ ಅರ್ಜಿ ಸಲ್ಲಿಸುವುದು ಸೂಕ್ತ. ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ವೆಬ್‌ಸೈಟ್ (ಜಾಲತಾಣ) **ದಿನಾಂಕ: 17/08/2026ರ** ರಾತ್ರಿ 11:59 ಘಂಟೆಯೊಳಗೆ ಸಲ್ಲಿಸಿದ ಅರ್ಜಿಗಳನ್ನಷ್ಟೇ ಅಂಗೀಕರಿಸುತ್ತದೆ.
- ಅರ್ಜಿಯಲ್ಲಿ ಸಂಪರ್ಕದ ಉದ್ದೇಶಕ್ಕೆ ಸಂಬಂಧಿಸಿದಂತೆ ಕೊಟ್ಟಿರುವ ಸೂಕ್ತ ಕಾಲಂಗಳನ್ನು ತುಂಬುವಾಗ ಸಂವಹನಕ್ಕಾಗಿ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ಐ.ಡಿ. ಅನ್ನು ಸರಿಯಾಗಿ ನಮೂದಿಸತಕ್ಕದ್ದು. ಸರಿಯಾದ ಮಾಹಿತಿ ಒದಗಿಸದೇ ಮೊಬೈಲ್ ಸಂಖ್ಯೆ/ಇ-ಮೇಲ್ ಸಂದೇಶ ಬರದಿದ್ದಲ್ಲಿ ನೇಮಕಾತಿ ಪ್ರಾಧಿಕಾರ ಹೊಣೆಯಾಗುವುದಿಲ್ಲ.
- ಅಭ್ಯರ್ಥಿ ವಿವರ ಅಪೂರ್ಣವಾಗಿರುವ, ಫೋಟೋ ಅಪ್-ಲೋಡ್ ಮಾಡದೇ ಇರುವ ಮತ್ತು ಸಹಿ ಅಪ್-ಲೋಡ್ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ಪ್ರಸ್ತುತ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಾದ ಪದವಿ ಪೂರ್ವ ಶಿಕ್ಷಣ ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿ. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಕನ್ನಡ ಮತ್ತು ಆಂಗ್ಲ ಕಿರಿಯ ದರ್ಜೆ ಬೆರಳಚ್ಚು ಪರೀಕ್ಷೆ ಉತ್ತೀರ್ಣ ಅಥವಾ ತತ್ಸಮಾನ ವಿದ್ಯಾರ್ಹತೆ ಅಂಕಪಟ್ಟಿಗಳನ್ನು ಅಪ್-ಲೋಡ್ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಯು ತಮ್ಮ ಮಾಹಿತಿಗಾಗಿ ಭರ್ತಿಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ನೇಮಕಾತಿ ಪ್ರಕ್ರಿಯೆಯು ಪೂರ್ಣಗೊಳ್ಳುವ ವರೆಗೆ ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಕೋರುವ ವಿವಿಧ ಮೀಸಲಾತಿಗೆ ಸಂಬಂಧಪಟ್ಟಂತೆ ಅಗತ್ಯ ದಾಖಲೆ/ಪ್ರಮಾಣ ಪತ್ರಗಳನ್ನು ಸೂಕ್ತ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗಾಗಿ ಅಥವಾ ಅಭ್ಯರ್ಥಿಯು ಅರ್ಜಿ ಸಲ್ಲಿಸುವ ದಿನಾಂಕದೊಳಗಾಗಿ ಪಡೆದಿಟ್ಟುಕೊಂಡಿರಬೇಕು ಹಾಗೂ ಚಾಲ್ತಿಯಲ್ಲಿರಬೇಕು. ಸದರಿ ದಾಖಲೆಗಳನ್ನು ಬೆರಳಚ್ಚು ಪರೀಕ್ಷೆಗೆ ಹಾಜರಾದಾಗ ಪರಿಶೀಲನೆಗಾಗಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ ನಂತರ ಪಡೆದ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳು ಜಾತಿ ಮೀಸಲಾತಿ / ಗ್ರಾಮೀಣ ಮೀಸಲಾತಿ/ ಎದ್ದು ಕಾಣುವ ಅಂಗವೈಕಲ್ಯ ಅಭ್ಯರ್ಥಿ ಮೀಸಲಾತಿ / 371 (ಜೆ) ಹೈದಾರಾಬಾದ್-ಕರ್ನಾಟಕ ಮೀಸಲಾತಿ ಕೋರಿದ್ದಲ್ಲಿ ಈ ಸಂಸ್ಥೆಯ ಜಾಲತಾಣದಲ್ಲಿ (ವೆಬ್‌ಸೈಟ್) ಪ್ರಕಟಿಸಿರುವ ನಿಗಧಿತ ನಮೂನೆಗಳಲ್ಲಿ ಪ್ರಮಾಣ ಪತ್ರಗಳನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ನೇಮಕಾತಿಯು ತಾತ್ಕಾಲಿಕವಾಗಿದ್ದು, ಆಯ್ಕೆಯಾಗಿ ನೇಮಕಗೊಂಡ ಅಭ್ಯರ್ಥಿಗಳು 2 ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.
- ಆಯ್ಕೆಯಾದ ಅಭ್ಯರ್ಥಿಗಳನ್ನು ಈ ಸಂಸ್ಥೆಯ ಯಾವುದೇ ಶಾಖಾ ಕಚೇರಿಗಳಿಗೆ ಕೂಡ ನೇಮಕ/ವರ್ಗಾವಣೆ ಮಾಡಬಹುದಾಗಿದೆ.
- ಈ ಅಧಿಸೂಚನೆಯ ಪ್ರಕಾರ ನೇಮಕಗೊಂಡವರು ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ(ಸ್ಪೆಷಲ್) 04 ಪಿಇಟಿ 2005, ದಿನಾಂಕ:31-6-2006ರಲ್ಲಿ ತಿಳಿಸಿದಂತೆ ಕಾಂಟ್ರಿಬ್ಯೂಟರಿ ಪಿಂಚಣಿ ಸ್ಕೀಂಗೆ ವಂತಿಗೆ ನೀಡಬೇಕಾಗುತ್ತದೆ.
- ಕೆ.ಸಿ.ಎಸ್. (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ಪ್ರಕಾರ ಅಥವಾ ಇನ್ನಾವುದೇ ನಿಯಮಗಳ ಪ್ರಕಾರ ಅಭ್ಯರ್ಥಿಯು ಅನರ್ಹರಾಗಿದ್ದಲ್ಲಿ ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅಭ್ಯರ್ಥಿಯ ತನ್ನ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರವನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
- ಅಭ್ಯರ್ಥಿಯು ಸ್ವಯಂ ದೃಢೀಕೃತ ಛಾಯಾಪ್ರತಿಗಳ (ದೃಢೀಕೃತ ಜೆರಾಕ್ಸ್ ಪ್ರತಿಗಳ) ಗುಚ್ಛದೊಂದಿಗೆ ಎಲ್ಲಾ ಮೂಲ ಅರ್ಹತಾ ಪತ್ರಗಳನ್ನು ಅಂದರೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ/10ನೇ ತರಗತಿ, ಪದವಿ ಪೂರ್ವ ಶಿಕ್ಷಣದ ಅಂಕಪಟ್ಟಿ, ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು, ಜಾತಿ ಪ್ರಮಾಣ ಪತ್ರಗಳು ಯಾವುದೇ ಮೀಸಲಾತಿ ಕ್ಲೇಮ್ ಮಾಡಿರುವ ಪ್ರಮಾಣ ಪತ್ರಗಳು ಮತ್ತು ಮೂರು ನಡತೆ ಪ್ರಮಾಣ ಪತ್ರಗಳನ್ನು (ಒಂದು ನಡತೆ ಪ್ರಮಾಣ ಪತ್ರವನ್ನು ಅಂತಿಮವಾಗಿ ವ್ಯಾಸಂಗ ಮಾಡಿದ ಶಿಕ್ಷಣ ಸಂಸ್ಥೆಯಿಂದಲೂ, ಇನ್ನೆರಡು ನಡತೆ ಪ್ರಮಾಣ ಪತ್ರಗಳನ್ನು ಅಭ್ಯರ್ಥಿಯ ಸಂಬಂಧಿಕರಲ್ಲದ ಗೌರವಾನ್ವಿತ ವ್ಯಕ್ತಿಗಳಿಂದಲೂ ಪಡೆದು) ಪರಿಶೀಲನೆಗಾಗಿ ಹಾಜರಾಗುವಾಗ ಹಾಜರುಪಡಿಸತಕ್ಕದ್ದು.
- ಕ್ಲರ್ಕ್-ಕಂ-ಟೈಪಿಸ್ಟ್ ಹುದ್ದೆಗೆ 1:10 ಅನುಪಾತದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತಾ ಪರೀಕ್ಷೆಯನ್ನು ಈ ಸಂಸ್ಥೆಯ ಕೇಂದ್ರ ಕಚೇರಿ ಬೆಂಗಳೂರಿನಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳು ಅರ್ಹತಾ ಪರೀಕ್ಷೆಗೆ ಸಮಯಕ್ಕೆ ಸರಿಯಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.
- ಅರ್ಹತಾ ಪರೀಕ್ಷೆಗೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಅಧಿಕೃತ ವೆಬ್‌ಸೈಟ್ (ಜಾಲತಾಣ) ನಲ್ಲಿ ಪ್ರಕಟಿಸಲಾಗುವುದು. ಅರ್ಹ ಅಭ್ಯರ್ಥಿಗಳ ಮೊಬೈಲ್‌ಗೆ ಸಂದೇಶ ಅಥವಾ ಇ-ಮೇಲ್ ಮೂಲಕ ಮಾಹಿತಿಯನ್ನು ನೀಡಲಾಗುವುದು. ಅರ್ಹತಾ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕರೆ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಹತಾ ಪರೀಕ್ಷೆ ದಿನ ಹಾಜರುಪಡಿಸತಕ್ಕದ್ದು.
- ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲ ಪಡೆಯುವ ಪ್ರಯತ್ನ ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳ ನೇಮಕಾತಿಯನ್ನು / ಅಭ್ಯರ್ಥಿಕೆಯನ್ನು ಅನರ್ಹಗೊಳಿಸಲಾಗುವುದು.
- ಈ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448/2025, 17968/2025 ಮತ್ತು 3145/2023ಗಳ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.
- ಮೇಲ್ಕಂಡ ಹುದ್ದೆಗಳಿಗೆ ಸಂಬಂಧಿಸಿದಂತೆ ಆನ್-ಲೈನ್ ಅರ್ಜಿಯನ್ನು ಸಲ್ಲಿಸುವಾಗ ಅಭ್ಯರ್ಥಿಯು ಮೇಲೆ ಸೂಚಿಸಲಾದಂತಹ ತನ್ನ ವಿದ್ಯಾರ್ಹತೆ ಹಾಗೂ ಇತರೇ ಮಾನದಂಡಗಳನ್ನು

ಪೂರ್ಣಗೊಳಿಸಲಾಗಿದೆಯೆಂದು ಹಾಗೂ ತಾನು ಒದಗಿಸಿರುವ ಎಲ್ಲಾ ವಿವರಗಳು ಎಲ್ಲಾ ಆಯಾಮಗಳಲ್ಲಿಯೂ ಸರಿಯಾಗಿವೆ ಎಂದು ಖಚಿತ ಪಡಿಸತಕ್ಕದ್ದು. ನೇಮಕಾತಿಯ ಯಾವುದೇ ಹಂತದಲ್ಲಿ, ಅಭ್ಯರ್ಥಿಯು ವಿದ್ಯಾರ್ಹತೆಯ ಮಾನದಂಡಗಳನ್ನು ಪೂರ್ಣಗೊಳಿಸಿಲ್ಲವೆಂದು ಅಥವಾ ಆತ/ಆಕೆ ಯಾವುದೇ ಪ್ರಮುಖ ವಾಸ್ತವಾಂಶಗಳನ್ನು ಮರೆಮಾಚಿರುತ್ತಾನೆ/ಳೆಂದು, ತಿರುಚಿರುತ್ತಾನೆ/ಳೆಂದು, ಮೊಟಕುಗೊಳಿಸಿರುತ್ತಾನೆ/ಳೆಂದು ಕಂಡು ಬಂದ ಸಂದರ್ಭದಲ್ಲಿ ಆತನ/ಆಕೆಯ ಅಭ್ಯರ್ಥಿಕೆಯನ್ನು ರದ್ದುಗೊಳಿಸಲಾಗುವುದು. ಈ ಯಾವುದೇ ನ್ಯೂನ್ಯತೆಗಳು ನೇಮಕಾತಿಯ ನಂತರ ಕಂಡುಬಂದರೂ ಸಹ ಮತ್ತು ತಪ್ಪಾದ, ಅಪೂರ್ಣವಾದ ಅಥವಾ ಸರಿಯಿಲ್ಲದ ಮಾಹಿತಿಯನ್ನು ಒದಗಿಸುವುದು ಅನರ್ಹತೆಗೆ ಕಾರಣವಾಗುವುದು ಮಾತ್ರವಷ್ಟೆ ಅಲ್ಲದೇ, ಅಂತಹ ಮಾಹಿತಿಯನ್ನು ಒದಗಿಸಿದ್ದಕ್ಕಾಗಿ ಕ್ರಿಮಿನಲ್ ಮೊಕದ್ದಮೆಗೆ ಹೊಣೆಗಾರನಾಗುತ್ತಾನೆ/ಳೆ.

ಸಹಿ/-
**ನಿಬಂಧಕರು,**
**ಕರ್ನಾಟಕ ಲೋಕಾಯುಕ್ತ,**
**ಬೆಂಗಳೂರು.**

**(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

## ನಮೂನೆ – ಡಿ

**(ನಿಯಮ 3ಎ (2) (3) ನೋಡಿ)**

## ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

### ಪ್ರಮಾಣ ಪತ್ರ

................................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ........................ಜಿಲ್ಲೆಯ/ವಿಭಾಗದ ................................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ/ಶ್ರೀಮತಿ...................... ಎಂಬುವವರ ಮಗ/ಮಗಳಾದ ಶ್ರೀ / ಶ್ರೀಮತಿ ................................................ ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951
(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿ ನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ1976ರ ಮೂಲಕ ತಿದ್ದುಪಡಿಯಾದಂತೆ ಸಂವಿದಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* .......................... ಮತ್ತು/ಅಥವಾ ಅವನ* / ಅವಳ* ಕುಟುಂಬವು .................................. ರಾಜ್ಯ / ಕೇಂದ್ರಾಡಳಿತ ಪ್ರದೇಶದ .............................. ಜಿಲ್ಲಾ / ವಿಭಾಗದ .......................... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ
ತಹಶೀಲ್ದಾರರು

ಸ್ಥಳ :
ದಿನಾಂಕ :

ಪದನಾಮ
ಕಛೇರಿಯ ಮೊಹರಿನೊಂದಿಗೆ
ರಾಜ್ಯ/ಕೇಂದ್ರಾಡಳಿತ ಪ್ರದೇಶ*

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

**ಸೂಚನೆ:** ಇಲ್ಲಿ ಉಪಯೋಗಿಸಿದ "ಸಾಮಾನ್ಯ ನಿವಾಸಿಗಳು" ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.
ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 /2/ 76-ಎಸ್‌ಸಿಟಿ-1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ
ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ
ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
(ಹೆಂಡತಿ/ಗಂಡ/ಇವರ ಸಹಿ)

## ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)
(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ....................................................................... ಎಂಬುವವರ ಮಗ/ಮಗಳು/ಪತಿ/ಪತ್ನಿ /ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ ................................ ಜಿಲ್ಲೆಯ ವಿಭಾಗ ............................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ
ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ
(Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು
ದಿನಾಂಕ : ........................ ತಾಲ್ಲೂಕು
ಕಛೇರಿಯ ಮೊಹರು

**ಸೂಚನೆ-1**: ಇದರಲ್ಲಿ ಉಪಯೋಗಿಸಲಾದ **"ಸಾಮಾನ್ಯ ನಿವಾಸಿ"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**ಸೂಚನೆ-2**: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

## ನಮೂನೆ-2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ / ಶ್ರೀಮತಿ ........................................................................ ರವರ ಮಗ/ ಮಗಳು/ ಪತ್ನಿ/ ಶ್ರೀ/ ಶ್ರೀಮತಿ/ ಕುಮಾರಿ ........................................ ಜಿಲ್ಲೆ ............................ ತಾಲ್ಲೂಕು ......................... ಗ್ರಾಮದಲ್ಲಿ .........................ವಾಸವಾಗಿರುವ ಇವರು .................................. ನೇ ತರಗತಿಯಿಂದ ................................ ನೇ ತರಗತಿಯವರೆಗೆ ........................................... ಜಿಲ್ಲೆ ........................... ತಾಲ್ಲೂಕು ..............................ಪಟ್ಟಣ ............................................... ಶಾಲೆಯಲ್ಲಿ ವ್ಯಾಸಂಗ ಮಾಡಿ ...................ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ
ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ
ಮೊಹರು

ಮೇಲುರುಜು
ಕ್ಷೇತ್ರ ಶಿಕ್ಷಣಾಧಿಕಾರಿ

---

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸನೆನಿ 2005, ದಿನಾಂಕ: 19.11.2005**

## CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………………… son/ wife / daughter of Shri ……………………………………………….. …………………….. Age ………………………… old, male / female, Registration No …………………………… is a case of …………….... He / She is physically disabled/visual disabled/speech & hearing disabled and has ………………….. % (……………………percent) permanent (physical impairment visual impairment speech & hearing impairment) in relation of his / her ……………………………

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of …………..months/years.

* Strike out which is not applicable

(Recent Attested
Photograph showing
the disability
affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impression
of the disabled person

**ಅನುಬಂಧ-ಎ**

**ಅರ್ಹತಾ ಪ್ರಮಾಣ ಪತ್ರ**

**(ಅನುಚ್ಛೇದ 371(ಜೆ) ಮೇರೆಗೆ)**

**(3)(3)ನೇ ನಿಯಮ ನೋಡಿ)**

**(ಪ್ರಮಾಣ ಪತ್ರ ನೀಡಲು ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)**

ಶ್ರೀ/ಶ್ರೀಮತಿ_______________________________________ರವರು_________________________

__ರವರ ಮಗ/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ ____________ಜಿಲ್ಲೆಯ

________________ ತಾಲ್ಲೂಕಿನ ______________________________ಗ್ರಾಮ/ಪಟ್ಟಣದ ಸ್ಥಳೀಯ

ವ್ಯಕ್ತಿಯಾಗಿದ್ದಾರೆ.

ಸ್ಥಳ:__________________

ದಿನಾಂಕ:_______________

ಹೆಸರು________________________________

ಅಸಿಸ್ಟೆಂಟ್ ಕಮೀಷನರ್____________________

__________________________ಉಪ ವಿಭಾಗ

____________________ಜಿಲ್ಲೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



## ಅನುಬಂಧ-ಎ
## ಸ್ವಗ್ರಾಮ ಪ್ರಮಾಣ ಪತ್ರ
## (ಅನುಚ್ಛೇದ 371(ಜೆ) ಮೇರೆಗೆ)

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಹೈದ್ರಾಬಾದ್-ಕರ್ನಾಟಕ ಮೀಸಲಾತಿಗೆ ಸಲ್ಲಿಸಬೇಕಾದ ಪ್ರಮಾಣ ಪತ್ರದ ದಿನಾಂಕ:29/01/2014ರ ಅಧಿಸೂಚನೆ-1ರಲ್ಲಿನ (5(2) ನೇ ನಿಯಮ ನೋಡಿ)
(ಪ್ರಮಾಣ ಪತ್ರಗಳ ನೀಡಿಕೆಗಾಗಿ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು 2013)

ಶ್ರೀ/ಶ್ರೀಮತಿ________________________________________ರವರು_________________________ __ರವರ ಮಗ/ಮಗಳು/ಹೆಂಡತಿಯಾಗಿದ್ದು, ಇವರು ಕರ್ನಾಟಕ ರಾಜ್ಯದ__________ ಜಿಲ್ಲೆಯ_______________ ತಾಲ್ಲೂಕಿನ_______________ ಗ್ರಾಮ/ಪಟ್ಟಣವನ್ನು ತನ್ನ ಸೇವಾ ಪುಸ್ತಕದಲ್ಲಿ ತನ್ನ ಸ್ವಗ್ರಾಮ/ಸ್ಥಳ ಎಂದು ಘೋಷಿಸಿರುತ್ತಾರೆ.

ಸೇವಾ ಪುಸ್ತಕದಲ್ಲಿರುವ ನಮೂದನ್ನು ನಾನು ಖುದ್ದಾಗಿ ಪರಿಶೀಲಿಸಿದ್ದೇನೆ ಮತ್ತು ಮೇಲಿನ ನಮೂದು 01-01-2013ಕ್ಕೆ ಮುಂಚೆ ಸೇವಾ ಪುಸ್ತಕದಲ್ಲಿ ಇತ್ತೆಂದು ಸ್ವತ: ಮನವರಿಕೆ ಮಾಡಿಕೊಂಡಿರುತ್ತೇನೆ.

ಸ್ಥಳ:______________ ಹೆಸರು __________________

ದಿನಾಂಕ:______________ ಪದನಾಮ __________________

ಕಚೇರಿ __________________

ಇಲಾಖೆ__________________

**PR-506**

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು